ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ: ಸಿ2(3) ದೂರು/05/2019-20 ದಿನಾಂಕ: 24-06-2021

<u>ಜ್ಞಾಪನ</u>

ವಿಷಯ: ಕಾನೂನು ಬಾಹಿರ ನಿಯೋಜನೆಗಳನ್ನು ಮಾಡಿರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಕುರಿತು.

ಉಲ್ಲೇಖ:1. ಸರ್ಕಾರದ ಪತ್ರ ಸಂಖ್ಯೆ: ಇಪಿ 63 ಡಿಎಆರ್ 2020, ದಿನಾಂಕ:15-09-2020.

2. ಶ್ರೀ.ರಮೇಶ ಬೆಟ್ಟಯ್ಯ, ಬೆಂಗಳೂರು ಇವರು ಇ- ಮೇಲ್ ಮುಖಾಂತರ ಸಲ್ಲಿಸಿರುವ ದೂರು

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಉಪನಿರ್ದೇಶಕರುಗಳು, ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮಕ್ಕಳ ಶೈಕ್ಷಣಿಕ ಹಿತಾಸಕ್ತಿಯನ್ನು ಗಮನದಲ್ಲಿರಿಸದೆ, ನಿಯಮಬಾಹಿರವಾಗಿ ಶಿಕ್ಷಕರನ್ನು ಇಲಾಖೆಯ ನಿಯಮಗಳನ್ನು ಉಲ್ಲಂಘಿಸಿ ನಿಯೋಜನೆ ಮಾಡಿರುವುದು ಕಂಡು ಬಂದಿದೆ.

ಈ ಬಗ್ಗೆ ನಿಯಮ ಉಲ್ಲಂಘಿಸಿ ಶಿಕ್ಷಕರುಗಳನ್ನು ನಿಯೋಜನೆಗೊಳಿಸಿರುವ ಉಪನಿರ್ದೇಶಕರುಗಳ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ದ ಶಿಸ್ತು ಕ್ರಮ ಜರುಗಿಸುವಂತೆ ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ನಿರ್ದೇಶನವಿರುತ್ತದೆ.

ಈ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಜಿಲ್ಲೆ/ತಾಲ್ಲೂಕುಗಳಲ್ಲಿ ನಿಯೋಜನೆ ಮೇಲೆ ಕಛೇರಿ/ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹ ಶಿಕ್ಷಕರನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಯೋಜಿತ ಶಿಕ್ಷಕರನ್ನು ಕರ್ತವ್ಯದಿಂದ ಬಿಡುಗಡೆ ಮಾಡಿ ಮೂಲ ಶಾಲೆಗಳಲ್ಲಿ ಕೂಡಲೇ ಕರ್ತವ್ಯಕ್ಕೆ ಹಾಜರಾಗುವಂತೆ ಅಗತ್ಯ ಕ್ರಮ ಕೈಗೊಂಡು ಈ ಕಛೇರಿಗೆ ವರದಿ ಮಾಡಲು ತಿಳಿಸಿದೆ. ತಪ್ಪಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೆಂದು ತಿಳಿಸಿದೆ.

**ಮಾನ್ಯರ ಆಯುಕ್ತರ ಆದೇಶದ ಮೇರೆಗೆ**

ಡಾ. ರೂಪಶ್ರೀ.ಎಸ್, ಕ.ಆ.ಸೇ
ಜಂಟಿ ನಿರ್ದೇಶಕರು (ಆಡಳಿತ)

ರವರಿಗೆ,

1. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕಗಳು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರುಗಳಿಗೆ ಮುಂದಿನ ತುರ್ತು ಕ್ರಮಕ್ಕಾಗಿ.
2. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ರವರುಗಳಿಗೆ ಮುಂದಿನ ತುರ್ತು ಕ್ರಮಕ್ಕಾಗಿ.
3. ಕಛೇರಿ ಪ್ರತಿ.